ದಿನಾಂಕಃ 01-06-2026 ರಂದು ಪ್ರಮಾಣ ವಚನ ಭೋದಿಸಲಾಯಿತು.
ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-

ನನಗೆ ಸದರಿ ದಿನ ಯಾರಿಂದ ಭಾತ್ಮಿ ಬಂದಿರುತ್ತದೆ ಎನ್ನುವ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೀರೇ ಎನ್ನುವ ಬಗ್ಗೆ ಸಾಕ್ಷಿದಾರರು ಸದರಿ ಭಾತ್ಮಿಯ ಮೂಲದ ಬಗ್ಗೆ ದಾಖಲೆಗಳನ್ನು ಹಾಜರುಪಡಿಸುವಂತಿಲ್ಲ ಎಂದು ನುಡಿಯುತ್ತಾರೆ. ಪ್ರ.ವ ವರದಿಯನ್ನು ದಾಖಲಿಸಿದ ನಂತರ ಘಟನಾ ಸ್ಥಳಕ್ಕೆ ಹೋಗಿರುತ್ತೇನೆ. ನನಗೆ ಯಾವುದೇ ಭಾತ್ಮಿ ಬಂದಿರಲಿಲ್ಲ ಎಂದರೆ ಸರಿಯಲ್ಲ. ನಮ್ಮ ಠಾಣಾ ಅಂಕಿ ಅಂಶಗಳಿಗೋಸ್ಕರ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಸದರಿ ದಿನ ನಾವು ಕಡೂರು ಮಾರ್ಗವಾಗಿ ಘಟನಾ ಸ್ಥಳಕ್ಕೆ ತಲುಪಿರುತ್ತೇವೆ. ನಾವು ಬಸವನಹಳ್ಳಿಗೆ ಹೋಗಿದ್ದು ಅಲ್ಲಿ ಪಂಚರಿಗೆ ನೋಟೀಸ್ ಅನ್ನು ನೀಡಿರುತ್ತೇವೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ.2 ರಂತಹ ಪ್ಲಾಸ್ಟೀಕ್ ಚೀಲಗಳು ಸಾಮಾನ್ಯವಾಗಿ ರೈತರ ಮನೆಗಳಲ್ಲಿ ದೊರಕುತ್ತವೆ ಎಂದರೆ ಸರಿ. ಮು.ಮಾ.1 ರಂತಹ ಸ್ಯಾಚೇಟ್ ಗಳು ಸಾಮಾನ್ಯವಾಗಿ ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಮದ್ಯದ ಅಂಗಡಿಗಳಲ್ಲಿ ಸಿಗುತ್ತದೆ ಎಂದರೆ ಸರಿ. ಸಾಕ್ಷಿದಾರರು ಸ್ವತಃ ನುಡಿಯುತ್ತಾರೆ ಮು.ಮಾ.1 ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಮದ್ಯದ ಅಂಗಡಿಗಳಲ್ಲಿ ಸಿಕ್ಕಿರುವುದಿಲ್ಲ.

ಘಟನಾ ಸ್ಥಳದಲ್ಲಿ ಯಾವುದೇ ಮಹಜರ್ ಅನ್ನು ತಯಾರಿಸಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಮಹಜರ್ ಅನ್ನು ಠಾಣೆಯಲ್ಲಿ ತಯಾರಿಸಿರುತ್ತೇವೆ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರನ್ನು ನಾನು ವಿಚಾರಿಸಿರುವುದಿಲ್ಲ

ಎಂದರೆ ಸರಿಯಲ್ಲ. ಮು.ಮಾ.1 ಮತ್ತು 2 ಕ್ಕೂ ಹಾಗೂ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಮ್ಮ ಮೇಲಾಧಿಕಾರಿಗಳ ಮಾತು ಕೇಳಿ ಆರೋಪಿ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-

ನಾನು ಈ ದಿನ ಫೋಟೋವನ್ನು ನೋಡುತ್ತಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-

ನಮ್ಮ ಇಲಾಖಾ ಕ್ಯಾಮೆರಾ ಸದರಿ ದಿನ ಆಳಾಗಿದ್ದುದರ ಕಾರಣ ಸದರಿ ದಿನ ಮೊಬೈಲ್ ನಲ್ಲಿ ಫೋಟೋವನ್ನು ತೆಗೆಯಲಾಗಿತ್ತು. ಮೊಬೈಲ್ ನಲ್ಲಿ ಫೋಟೋ ತೆಗೆದಾಗ ಸಮಯ ಮತ್ತು ದಿನಾಂಕ ಬರುತ್ತದೆ ಎಂದರೆ ಸರಿ. ನಿಪಿ-12 ರಲ್ಲಿ ಸಮಯ ಹಾಗೂ ದಿನಾಂಕ ನಮೂದು ಇರುವುದು ಕಂಡುಬರುವುದಿಲ್ಲ ಎಂದರೆ ಸರಿ. ಸದರಿ ಫೋಟೋದಲ್ಲಿ ಮೊಬೈಲ್ ನ ಮಾಡೆಲ್ ಕಂಡುಬರುತ್ತದೆ ಎಂದರೆ ಸರಿಯಲ್ಲ. ನಿಪಿ-12 ನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

C.C.No.1136/2025
PW-3 CW-1

ಎಸ್‌ಆರ್ಃ

C.C.No.1136/2025
PW-3 CW-1